## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 669 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24-09-2019.

## ಸುತ್ತೋಲೆ

**ವಿಷಯ :** ರಾಷ್ಟ್ರೀಯ ಹಸಿರು ಮಂಡಳಿಯ ತೀರ್ಮಾನದಂತೆ ಜೀವವೈವಿಧ್ಯ ನಿರ್ವಹಣಾ ಸಮಿತಿಗಳನ್ನು ರಚಿಸುವ ಬಗ್ಗೆ.

**ಉಲ್ಲೇಖ:**
1. ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ರವರ ಸುತ್ತೋಲೆ ಸಂಖ್ಯೆ:ಅಪಜೀ 63 ಇಎನ್‌ವಿ 2019, ದಿನಾಂಕ: 13-08-2019.
2. ಮಾನ್ಯ ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ ಪ್ರಧಾನ ಪೀಠ, ನವದೆಹಲಿಯ ಮೂಲ ಅರ್ಜಿ ಸಂಖ್ಯೆ:347/2016 ರಲ್ಲಿ ದಿನಾಂಕ:09-08-2019 ರಂದು ನೀಡಿರುವ ಆದೇಶ.

*****

ಜೈವಿಕವೈವಿಧ್ಯ ಅಧಿನಿಯಮ, 2002 ರ ಸೆಕ್ಷನ್ 41(1) ಮತ್ತು ಕರ್ನಾಟಕ ಜೈವಿಕ ವೈವಿಧ್ಯ ನಿಯಮಗಳು, 2005 ರ ನಿಯಮ 22 ರನ್ವಯ ಪ್ರತಿಯೊಂದು ಸ್ಥಳೀಯ ಸಂಸ್ಥೆಗಳಲ್ಲಿ ಅಂದರೆ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಾದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಜೀವ ವೈವಿಧ್ಯ ನಿರ್ವಹಣಾ ಸಮಿತಿಗಳ ರಚನೆಯಾಗಿರಬೇಕಾಗುತ್ತದೆ ಹಾಗೂ ಜನತಾ ವೈವಿಧ್ಯ ದಾಖಲಾತಿಗಳನ್ನು ತಯಾರಿಸಬೇಕಾಗಿರುತ್ತದೆ.

ಮಾನ್ಯ ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ, ಪ್ರಧಾನ ಪೀಠ, ನವದೆಹಲಿಯ ಮೂಲ ಅರ್ಜಿ ಸಂಖ್ಯೆ:347/2016 ರಲ್ಲಿ ದಿನಾಂಕ:09-08-2019 ರಂದು ನೀಡಿರುವ ಆದೇಶ (ಪ್ರತಿ ಲಗತ್ತಿಸಿದೆ) ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ ರವರು ಜೀವವೈವಿಧ್ಯ ನಿರ್ವಹಣಾ ಸಮಿತಿಗಳ ರಚನೆ ಹಾಗೂ ಜನತಾ ಜೀವವೈವಿಧ್ಯ ದಾಖಲಾತಿ ತಯಾರಿಕೆ ಹಾಗೂ ಜೀವವೈವಿಧ್ಯತೆಯ ಅನುದಾನದ ಬಗ್ಗೆ ದಿನಾಂಕ:13-08-2019 ರಂದು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಅಪಜೀ 63 ಇಎನ್‌ವಿ 2019 ರಂತೆ ಗ್ರಾಮೀಣ ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತಿಗಳಲ್ಲಿ ಜೀವವೈವಿಧ್ಯ ನಿರ್ವಹಣಾ ಸಮಿತಿಗಳನ್ನು ರಚಿಸಲು ಮತ್ತು ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳು ಮೇಲ್ವಿಚಾರಣೆ ಮಾಡಲು ಹಾಗೂ ಜನತಾ ಜೀವವೈವಿಧ್ಯ ದಾಖಲಾತಿ ತಯಾರಿಕೆ ಬಗ್ಗೆ ಕ್ರಮ ವಹಿಸಬೇಕಾಗಿರುತ್ತದೆ.

ಗ್ರಾಮೀಣ ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತಿಗಳಲ್ಲಿ ಜೀವವೈವಿಧ್ಯ ನಿರ್ವಹಣಾ ಸಮಿತಿಗಳನ್ನು ರಚಿಸಲು ಮತ್ತು ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳು ಮೇಲ್ವಿಚಾರಣೆ ಮಾಡಲು ಹಾಗೂ ಜನತಾ ಜೀವವೈವಿಧ್ಯ ದಾಖಲಾತಿ ತಯಾರಿಕೆ ಬಗ್ಗೆ ಕೂಡಲೇ ಕ್ರಮಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ.

Narayan Bey. 24/9/19
(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,

2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4) ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೈವಿಕ ವೈವಿಧ್ಯ ಮಂಡಳಿ, ವನವಿಕಾಸ ಕಟ್ಟಡ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-03.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
6) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.